# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1904
ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 16.03.2022.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರೈತರು ತಮ್ಮ ಕೃಷಿ ಭೂಮಿಯಲ್ಲಿ ಮನೆಯನ್ನು (ಫಾರ್ಮ್ ಹೌಸ್) ನಿರ್ಮಿಸಲು ಪರವಾನಗೆಯನ್ನು ಪಡೆಯಬೇಕಾದ ಪ್ರಾಧಿಕಾರ ಯಾವುದು; ಪರವಾನಗಿ ಪಡೆಯಲು ಸಲ್ಲಿಸಬೇಕಾದ ದಾಖಲೆಗಳು ಯಾವುವು; ಅರ್ಜಿ ನಮೂನೆ ಯಾವುವು; ಸಕಾಲ ವ್ಯಾಪ್ತಿಗೆ ಈ ಸೇವೆಯನ್ನು ತರಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು; (ಆದೇಶದ ಪ್ರತಿಯನ್ನು ಒದಗಿಸುವುದು) | ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95(1)ರಡಿ ಕೃಷಿಕರು ಹೊಂದಿರುವ ಕೃಷಿ ಭೂಮಿಯ ಒಟ್ಟು 10 ರಷ್ಟು ವಿಸ್ತೀರ್ಣವನ್ನು ಫಾರ್ಮಹೌಸ್ ಉದ್ದೇಶಕ್ಕೆ ಬಳಸಿಕೊಳ್ಳಲು ಅವಕಾಶವಿರುತ್ತದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 11 ಎಲ್‌ಜಿಪಿ 2018, ದಿನಾಂಕ: 20.01.2018ರಂತೆ ಸಂಬಂಧಪಟ್ಟ ಕಂದಾಯ ನಿರೀಕ್ಷರಿಗೆ ಅವಕಾಶ ಕಲ್ಪಿಸಲಾಗಿದೆ. (ಪ್ರತಿ ಲಗತ್ತಿಸಿದೆ) |
| ಆ) | ಈ ಫಾರ್ಮ್ ಹೌಸ್ ಗಳಿಗೆ ಕಟ್ಟಡ ಸಂಖ್ಯೆ ಮತ್ತು ವಿದ್ಯುತ್ ಸಂಪರ್ಕವನ್ನು ಪಡೆಯಲು ಅನುಸರಿಸಬೇಕಾದ ಮಾರ್ಗಸೂಚಿಗಳು ಯಾವುವು; (ಆದೇಶದ ಪ್ರತಿಯನ್ನು ಒದಗಿಸುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 11 ಎಲ್‌ಜಿಪಿ 2018, ದಿನಾಂಕ: 20.01.2018ರಂತೆ ಫಾರ್ಮ್ ಹೌಸ್ ನಿರ್ಮಾಣವು ಸಂದರ್ಭೋಚಿತವಾಗಿದ್ದು, ಉತ್ತಮ ಸಾಗುವಳಿಗಾಗಿ ಅಥವಾ ವ್ಯವಸಾಯದ ಉಪಯೋಗಕ್ಕಾಗಿದ್ದು, ತನ್ನದೇ ಆದ ಸ್ವತಂತ್ರ ಅಸ್ತಿತ್ವವನ್ನು ಹೊಂದಿರದ ಕಾರಣ ಮತ್ತು ಯಾವುದೇ ಪರಿವರ್ತನೆಯಾಗಿರದ ಕಾರಣ, ಫಾರ್ಮ್ ಹೌಸ್ ನಿರ್ಮಾಣಕ್ಕೆ ಪ್ರತ್ಯೇಕವಾದ ಗ್ರಾಮ ಪಂಚಾಯಿತಿ ಮುನಿಸಿಪಾಲಿಟಿಯವರು ಆಸ್ತಿ ಸಂಖ್ಯೆಯನ್ನು ರಚಿಸತಕ್ಕದ್ದಲ್ಲ ಎಂದು ಇರುತ್ತದೆ. |
| ಇ) | ಈ ಫಾರ್ಮ್ ಹೌಸ್‌ಗಳ ಭೂ ಮಾರಾಟ/ವಿಭಾಗದ ಸಮಯದಲ್ಲಿ ಭೂ ಪರಿವರ್ತನೆಯನ್ನು ಕಡ್ಡಾಯ ಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಕಾರಣವೇನು? | ಫಾರ್ಮಹೌಸ್ ಭಾಗದ ಆಸ್ತಿಯನ್ನು ಯಾವುದೇ ವ್ಯವಹಾರ ಅಥವಾ ಮಾರಾಟ ಮಾಡಬೇಕಾದ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ/ಮುನಿಸಿಪಲ್ ಆಸ್ತಿ ಸಂಖ್ಯೆ ನೀಡಬೇಕಾಗಿದ್ದಲ್ಲಿ, ಕರ್ನಾಟಕ ಭೂ ಕಂದಾಯ 1694ರ ಕಲಂ 95 ರಡಿ ಭೂ ಪರಿವರ್ತನೆ ಕಡ್ಡಾಯವಾಗಿರುತ್ತದೆ. |

ಸಂಖ್ಯೆ: ಆರ್‌ಡಿ 111 ಎಲ್‌ಜಿಕ್ಯೂ 2022

(ಆರ್.ಅಶೋಕ)
ಕಂದಾಯ ಸಚಿವರು

**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 11 ಎಲ್‌ಜಿಪಿ 2018

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 29-01-2018.

## ಸುತ್ತೋಲೆ

**ವಿಷಯ:** ಕೃಷಿ ಭೂಮಿಯಲ್ಲಿ ನಿರ್ಮಿಸಿದ Farm House ಕುರಿತು ಮಾರ್ಗಸೂಚಿಗಳು.

* * *

ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95(1)ರ ಪರಂತುಕದಲ್ಲಿ ಕೃಷಿಕರು ಕೃಷಿ ಭೂಮಿಯ ಒಟ್ಟು ವಿಸ್ತೀರ್ಣದ ಶೇಕಡ 10 ರಷ್ಟು ಮೀರದ ಜಾಗದಲ್ಲಿ ಫಾರ್ಮ್‌ಹೌಸ್ ಕಟ್ಟಿಕೊಳ್ಳಬಹುದಾಗಿದೆ ಎಂದು ತಿಳಿಸಲಾಗಿದೆ. ಸದರಿ ಫಾರ್ಮ್‌ಹೌಸ್ ಅನ್ನು ಕೃಷಿಕರ ಹಾಗೂ ಅವರ ಕುಟುಂಬದ ವಾಸ್ತವ್ಯಕ್ಕಾಗಿ ಹಾಗೂ ಕೃಷಿ ಸಲಕರಣೆಗಳನ್ನು ಇಟ್ಟುಕೊಳ್ಳುವ ಸಲುವಾಗಿ ಮಾತ್ರ ಉಪಯೋಗಿಸತಕ್ಕದ್ದಾಗಿರುತ್ತದೆ. ಮುಂದುವರೆದು, ಸದರಿ ಫಾರ್ಮ್‌ಹೌಸ್ ಅನ್ನು ಬಾಡಿಗೆ ನೀಡಲಾಗಲೀ ಹಾಗೂ ಇತರೆ ವಾಣಿಜ್ಯ ಉದ್ದೇಶಕ್ಕಾಗಲೀ ಬಳಸಲು ಅವಕಾಶವಿರುವುದಿಲ್ಲ.

ಕೃಷಿಕರು ಕೃಷಿ ಭೂಮಿಯಲ್ಲಿನ ಫಾರಂ ಹೌಸ್ ಎಂದು ಪರಿಗಣಿಸುವ ಆಸ್ತಿಗಳಿಗೆ ಸಂಬಂಧಿಸಿದಂತೆ, ಈ ಕೆಳಕಂಡ ಸೂಚನೆಗಳನ್ನು ಅನುಸರಿಸುವಂತೆ ಈ ಮೂಲಕ ತಿಳಿಸಲಾಗಿದೆ:-

1. ಆರ್.ಟಿ.ಸಿ ಯಂತೆ ಭೂಮಿಯ ಮಾಲೀಕರು ಹೊಂದಿರುವ ವ್ಯವಸಾಯ ಜಮೀನಿನ ಗರಿಷ್ಠ ಶೇ.10 ರಷ್ಟು ಜಮೀನಿನಲ್ಲಿ ('ಬಿ' ಖರಾಬು ಜಮೀನನ್ನು ಹೊರತುಪಡಿಸಿ) ಫಾರ್ಮ್‌ಹೌಸ್, ಬಾವಿ ಅಥವಾ ತೊಟ್ಟಿ ಇತ್ಯಾದಿಯನ್ನು ನಿರ್ಮಾಣ ಮಾಡಲು ಲಿಖಿತ ರೂಪದಲ್ಲಿ ತಮ್ಮ ಇಚ್ಚೆಯನ್ನು ಕಂದಾಯ ನಿರೀಕ್ಷಕರಿಗೆ ವ್ಯಕ್ತಪಡಿಸಬಹುದಾಗಿದೆ.

2. ಆರ್.ಟಿ.ಸಿಯಲ್ಲಿ ಭೂಮಾಲೀಕರ ಇಚ್ಛೆಯಂತೆ (ಸೂಚಿಸಲಾಗಿರುವ 10% ಮಿತಿಗೊಳಪಟ್ಟು ಫಾರ್ಮ್‌ಹೌಸ್, ಬಾವಿ ಅಥವಾ ತೊಟ್ಟಿಯ ನಿರ್ಮಾಣದ ವಿವರವನ್ನು ಕಲಂ 11ರಲ್ಲಿ ನಮೂದಿಸಲು ಅನುವಾಗುವಂತೆ ಭೂಮಿ ತಂತ್ರಾಂಶದಲ್ಲಿ ಕಂದಾಯ ನಿರೀಕ್ಷಕರವರ ಲಾಗಿನ್‌ನಲ್ಲಿ ಹೊಸ ಸೇವೆಯನ್ನು ಸೇರಿಸಲಾಗುತ್ತಿದೆ.

3. ಈ ನಿರ್ಮಾಣವು ಸಂದರ್ಭೋಚಿತವಾಗಿದ್ದು, ಉತ್ತಮ ಸಾಗುವಳಿಗಾಗಿ ಅಥವಾ ವ್ಯವಸಾಯ ಉಪಯೋಗಕ್ಕಾಗಿದ್ದು, ತನ್ನದೇ ಆದ ಸ್ವತಂತ್ರ ಅಸ್ತಿತ್ವವನ್ನು ಹೊಂದಿರದ ಕಾರಣ ಮತ್ತು ಯಾವುದೇ ಪರಿವರ್ತನೆಯಾಗಿರದ ಕಾರಣ, ಈ ನಿರ್ಮಾಣಕ್ಕೆ ಪ್ರತ್ಯೇಕವಾದ ಗ್ರಾಮ ಪಂಚಾಯಿತಿ/ಮುನಿಸಿಪಾಲಿಟಿಯವರು ಆಸ್ತಿ ಸಂಖ್ಯೆಯನ್ನು ರಚಿಸತಕ್ಕದ್ದಲ್ಲ.

-2

4. ಪ್ರಸ್ತಾಪಿತ ಫಾರ್ಮ್‌ಹೌಸ್ ಭಾಗದ ಆಸ್ತಿಯನ್ನು ಯಾವುದೇ ವ್ಯವಹಾರ ಅಥವಾ ಮಾರಾಟ ಮಾಡಬೇಕಾದ ಸಂದರ್ಭದಲ್ಲಿ ಅಥವಾ ಗ್ರಾಮ ಪಂಚಾಯಿತಿ/ಮುನಿಸಿಪಲ್ ಆಸ್ತಿ ಸಂಖ್ಯೆಯನ್ನು ನೀಡಬೇಕಾಗಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95ರಡಿ ಭೂ ಪರಿವರ್ತನೆಯು ಕಡ್ಡಾಯವಾಗಿರುತ್ತದೆ.

5. ಫಾರ್ಮ್‌ಹೌಸ್, ಬಾವಿ ಅಥವಾ ತೊಟ್ಟಿ ಇತ್ಯಾದಿ ನಿರ್ಮಾಣವು ಇತರೆ ಸಂಬಂಧಿಸಿದ ಕಾಯ್ದೆ ಮತ್ತು ನಿಯಮಗಳಿಗೆ ಒಳಪಟ್ಟಿರುತ್ತದೆ.

6. ಮೇಲಿನ ಸೂಚನೆಗಳನ್ನು ಭೂಮಿ ತಂತ್ರಾಂಶದಲ್ಲಿ ಸೂಕ್ತ ರೀತಿಯಲ್ಲಿ ಅಳವಡಿಸುವಂತೆ ಸೂಚಿಸಲಾಗಿದೆ.

29.1.18

(ಎಸ್.ಎಲ್.ಮಹಾಂತೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂಮಂಜೂರಾತಿ-1).

**ಇವರಿಗೆ:**

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗ.
2. ಎಲ್ಲಾ ಜಿಲ್ಲಾಧಿಕಾರಿಗಳಿಗೆ.
3. ಎಲ್ಲಾ ಉಪ ವಿಭಾಗಾಧಿಕಾರಿಗಳಿಗೆ (ಜಿಲ್ಲಾಧಿಕಾರಿಗಳ ಮುಖಾಂತರ).
4. ಎಲ್ಲಾ ತಹಶೀಲ್ದಾರ್‌ರವರುಗಳಿಗೆ (ಜಿಲ್ಲಾಧಿಕಾರಿಗಳ ಮುಖಾಂತರ).
5. ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ.
3. ಸರ್ಕಾರದ ಅಪರ/ಉಪ/ಅಧೀನ ಕಾರ್ಯದರ್ಶಿ/ಪೀಠಾಧಿಕಾರಿಗಳು, ಕಂದಾಯ ಇಲಾಖೆ.